<u>ಓ.ಎಸ್ ನಂ. 219/220</u>
<u>ಡಿಡಬ್ಲ್ಯೂ 02</u>

ದಿನಾಂಕಃ 18.03.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೊಧಿಸಲಾಯಿತು.

<u>ಮುಂದುವರೆದ ಮುಖ್ಯವಿಚಾರಣೆಃ</u> <u>1 ರಿಂದ 4 ಮತ್ತು 6 ನೇ ಪ್ರತಿವಾದಿಯರ ಪರ ವಕೀಲರಿಂದಃ</u>

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಹಾಜರು ಪಡಿಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತವೆ. ಅದಕ್ಕೆ ನಾನು ಸಹಿ ಮಾಡಿದ್ದೇನೆ.

<u>ಪಾಟೀಸವಾಲುಃ ವಾದಿಯ ಪರ ವಕೀಲರಿಂದಃ</u>

ಈ ದಾವೆಯನ್ನು ಯಾರು ಯಾರ ಮೇಲೆ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಸರ್ವೇ ನಂಬರ್ ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಚೆಕ್ ಬಂದಿ ನನಗೆ ಗೊತ್ತಿಲ್ಲ. ಅದರ ಪಕ್ಕದಲ್ಲಿ ನನ್ನ ಜಮೀನು ಇರುತ್ತದೆ. ದಾವಾ ಸ್ವತ್ತಿನ ಪೂರ್ವದ ದಿಕ್ಕಿಗೆ ನನ್ನ ಜಮೀನು ಇರುತ್ತದೆ. ನನ್ನ ಆಸ್ತಿ ಸರ್ವೇ ನಂಬರ್ ನನಗೆ ನೆನಪಿಲ್ಲ. ದಾವಾ ಜಮೀನಿನ ಪಕ್ಕದಲ್ಲಿ ನನ್ನ ಜಮೀನು ಇಲ್ಲದೇ ಇದ್ದರೂ ಸಹ ಇದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಮ್ಮ ಸಾಕ್ಷ್ಯ ಪ್ರಮಾಣಪತ್ರದಲ್ಲಿ ಸರ್ವೇ ನಂಬರ್ ಮತ್ತು ಚೆಕ್ ಬಂದಿಗಳು ಎಂದು ಬರೆಸಿದ್ದೀರಿ ಆದರೆ ನನಗೆ ಗೊತ್ತಿಲ್ಲವೆಂದು ಈಗ ಹೇಳಿದ್ದೀರಿ ಆದರೆ ಅದನ್ನು ಯಾರು ಬರೆಸಿದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲವೆನ್ನುತ್ತಾರೆ. ನಿಮ್ಮ ಸಾಕ್ಷ್ಯಪ್ರಮಾಣಪತ್ರವನ್ನು ಬರೆಸಲು ಮಾಹಿತಿಯನ್ನು ಯಾರು ಕೊಟ್ಟಿದ್ದಾರೆಂದರು ಸಾಕ್ಷಿಗೆ ಕೇಳಲಾಗಿ ಗೊತ್ತಿಲ್ಲ ಎನ್ನುತ್ತಾರೆ.

ಈ ಹಂತದಲ್ಲಿ ಮುಂದುವರೆದ ಪಾಟೀಸವಾಲಿಗೆ ಸಮಯ ಕೋರಿದ್ದು, ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ ರೀತಿ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ

(ಕೆ ಎಮ್ ಶಂಕರ್)
1 ನೇ ಹೆಚ್ಚುವರಿ ಹಿರಿಯ ದಿವಾಣಿ
ನ್ಯಾಯಾಧೀಶರು, ಗೋಕಾಕ

ಸಾಕ್ಷಿಯ ಸಹಿ